# ಮಾನವನ ಅತಿರೇಕದಿಂದ ಪರಿಸರಕ್ಕೆ ಹಾನಿ

VK. 22-02

**ಬೆಂಗಳೂರು:** ಮಾನವನ ಅತಿರೇಕದ ವರ್ತನೆಯಿಂದ ಪರಿಸರಕ್ಕೆ ಹಾನಿಯುಂಟಾಗುತ್ತಿದೆ ಎಂದು ಅರಣ್ಯ ಇಲಾಖೆಯ ವಲಯ ಅರಣ್ಯಾಧಿಕಾರಿ ವಿ.ಗಣೇಶ್ ಹೇಳಿದರು.

ಭಾನುವಾರ ದಿ ಆಕ್ಸ್‌ಫರ್ಡ್ ವಿಜ್ಞಾನ ಕಾಲೇಜಿನ ರಾಷ್ಟ್ರೀಯ ಸೇವಾ ಯೋಜನೆ ಘಟಕ, ಬನ್ನೇರುಘಟ್ಟ ವನ್ಯಜೀವಿ ವಲಯ ಜಂಟಿಯಾಗಿ ಆಯೋಜಿಸಿದ್ದ ಸ್ವಚ್ಛ ಭಾರತ್ ಅಭಿಯಾನ್ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಮಿತಿಮೀರಿದ ಪ್ಲಾಸ್ಟಿಕ್ ತ್ಯಾಜ್ಯದ ಉತ್ಪಾದನೆ ಪರಿಸರದ ಮೇಲೆ ದುಷ್ಪರಿಣಾಮ ಬೀರುತ್ತಿದೆ. ಅಲ್ಲದೆ ಅನಾವೃಷ್ಟಿ, ಅಂತರ್ಜಲದ ಕ್ಷೀಣತೆ, ಪ್ರಾಣಿ ಸಂಕುಲಕ್ಕೆ ಮಾರಕವಾಗಿದೆ. ಹೀಗಾಗಿ ಪ್ಲಾಸ್ಟಿಕ್ ಬಳಕೆಯನ್ನು ಮಿತಿಗೊಳಿಸಿ, ಆರೋಗ್ಯಕರ ಪರಿಸರ ನಿರ್ಮಾಣ ಕಾರ್ಯದಲ್ಲಿ ಸ್ವಯಂ ಸೇವಕರ ಪಾತ್ರ ಬಹುಮುಖ್ಯ ಎಂದರು. ಇದೇ ವೇಳೆ ವನ್ಯಜೀವಿ ವಲಯ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಪ್ಲಾಸ್ಟಿಕ್ ತೆರವುಗೊಳಿಸಲಾಯಿತು. ಕಾಲೇಜಿನ ಪ್ರಾಂಶುಪಾಲ ಡಾ.ಆರ್. ಕಾವ್ಯಶ್ರೀ, ಮರಿಸ್ವಾಮಿ. ಎನ್, ಅರಣ್ಯ ಸಂರಕ್ಷಕರು ಹಾಗೂ ಎನ್‌ಎಸ್‌ಎಸ್ ಘಟಕದ ಸ್ವಯಂಸೇವಕರು ಹಾಜರಿದ್ದರು.